ಮೈಸೂರ ಗೆಜೆಟ್.

ನಂ. 11] ಸರ್ಕಾರದಿಂದ ಪ್ರಾಯಿಷ್ ಆದ್ದು. [1895.

ಬೆಂಗಳೂರು, ಗುರುವಾರ, ಮಾರ್ಚಿ ತಾ|| 28, ಸ್ಯ 1895.

ವಿಷಯ ಸೂಚಿಕೆ.

1ನೇ ಭಾಗ—ಮೈಸೂರು ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

2ನೇ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರೆಜಿಸ್ಟ್ರೇರ್ಷ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರೆಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರ್ಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ, ಕಾಲಸ್ಥಿತಿ ರಿಪೋರ್ಟುಗಳು; ಪೋಸ್ಟ್‌ಆಫಿಸ್ ನೋಟಿಸ್‌ಗಳು.

3ನೇ ಭಾಗ—ಮೈಸೂರ್ ಸರ್ಕಾರದಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇರ್ಷಗಳು.—ಇಲ್ಲ.

4ನೇ ಭಾಗ—ಸರ್ಕಾರೀ ಕಾಗದ ಪತ್ರಗಳು.—ಇಲ್ಲ.

☞ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟ ನಂಬೆ ಕೊಡಲ್ಪಡುತ್ತೆ.

1ನೇ ಭಾಗ.

ಮೈಸೂರ್ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ತಾರೀಖು 14ನೇ ಮಾರ್ಚಿ 1895.

ನಂ. 14938.—ಜಿ. 4282.—ಮೈಸೂರ್ ಸರ್ವಿಸ್ ರೆಗ್ಯುಲೇರ್ಷಗಳ 172ನೇ ಆರ್ಟಿಕಲ್ ಅನುಸರಿಸಿ, ಕುಂಸಿ ಡೆಪ್ಯೂಟಿ ಅಮಲ್‌ದಾರ್ ಕೆ. ಸುಬ್ಬರಾಯರು, 1895ನೇ ಇಸವಿ ಮಾರ್ಚಿ 11ನೇ ತಾರೀಖು ಮೊದಲು 8 ದಿನಗಳ ಕ್ಯಾಜುಯಲ್ ರಜಾ ಕೊಡಲ್ಪಟ್ಟರುತ್ತಾರೆ.

ತಾರೀಖು 15ನೇ ಮಾರ್ಚಿ 1895.

ನಂ. 15017.—ಜಿ. 4299.—ಎಡತೊರೆ ತಾಲ್ಲೂಕು ಅಮಲ್‌ದಾರರು ವೆಂಕಟಾಚಲಯ್ಯನವರಿಗೆ, ಸ್ಯ 1895ನೇ ಇಸವಿ ಫಿಬ್ರವರಿ 11ನೇ ಮರ್ತು ಂ 12116.—ಜಿ. 2902ನೇ ನಂಬರ್ ಇಸ್ತಿಹಾರ್‌ನಾಮೆಯ ಮೂಲಕ ಕೊಡಲ್ಪಟ್ಟ ಯೆಂಟು ದಿನಗಳ ಕ ಜುಯಲ್ ರಜಾ ಮತ್ತೂ ಯೀಳು ದಿನಗಳಿಗೆ ಜಾಸ್ತೀ ಮಾಡಲ್ಪಟ್ಟಿದೆ.